# ದಾವಣಗೆರೆ ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಶಿವಗಂಗೋತ್ರಿ, ದಾವಣಗೆರೆ-577007

ಫ್ಯಾಕ್ಸ್: 08192-208008 ದೂರವಾಣಿ ಸಂಖ್ಯೆ: 08192-208029


ಸಂಖ್ಯೆ:ದಾವಿವಿ/ಮಾಸನಿ/191/2026-27/1751(A) ದಿನಾಂಕ: 10.07.2026

**-: ಅಧಿಸೂಚನೆ :-**

ವಿಷಯ: ಅತಿಥಿ ಉಪನ್ಯಾಸಕರು/ಬೋಧನಾ ಸಹಾಯಕರ ಹುದ್ದೆಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಸಂದರ್ಶನ ನಡೆಸುವ ಕುರಿತು.

ಉಲ್ಲೇಖ: ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 07.07.2026

******

ವಿಶ್ವವಿದ್ಯಾನಿಲಯದ ಘಟಕ ಕಾಲೇಜಾದ ತುರುವನೂರುನಲ್ಲಿನ ಈ ಕೆಳಕಂಡ ಸ್ನಾತಕ ಪದವಿ ವಿಷಯಗಳಿಗೆ 2026-27ನೇ ಶೈಕ್ಷಣಿಕ ಸಾಲಿನ ಹೆಚ್ಚುವರಿ ಕಾರ್ಯಭಾರಕ್ಕನುಗುಣವಾಗಿ ಅತಿಥಿ ಉಪನ್ಯಾಸಕರು / ಬೋಧನಾ ಸಹಾಯಕರುಗಳನ್ನು ತಾತ್ಕಾಲಿಕವಾಗಿ ನೇಮಕ ಮಾಡಿಕೊಳ್ಳಲು ಯುಜಿಸಿ ನಿಯಮಗಳನುಸಾರ **(Ph.D., NET/SLET)** ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಅರ್ಜಿ ಸಲ್ಲಿಸಿದ ಅರ್ಹ ಅಭ್ಯರ್ಥಿಗಳು ದಿನಾಂಕ:14.07.2026 ರಂದು ಪೂರ್ವಾಹ್ನ 12.30ಕ್ಕೆ ವಿಶ್ವವಿದ್ಯಾನಿಲಯದ ಕೇಂದ್ರ ಕಾರ್ಯಾಲಯ, ಶಿವಗಂಗೋತ್ರಿ, ಕ್ಯಾಂಪಸ್ (ತೋಳಹುಣಸೆ) ಇಲ್ಲಿ ಏರ್ಪಡಿಸಲಾಗಿರುವ ಸಂದರ್ಶನಕ್ಕೆ ಹಾಜರಾಗಲು ತಿಳಿಸಲಾಗಿದೆ. ಅಭ್ಯರ್ಥಿಗಳು ಶೈಕ್ಷಣಿಕ ವಿದ್ಯಾರ್ಹತೆ/ಅನುಭವಕ್ಕೆ ಹಾಗೂ ಮೀಸಲಾತಿಗೆ ಸಂಬಂಧಿಸಿದ ಮೂಲ ದಾಖಲಾತಿಗಳು ಹಾಗೂ ಅದರ ಒಂದು ಸೆಟ್ ಜೆರಾಕ್ಸ್ ಪ್ರತಿಯೊಂದಿಗೆ ಸಂದರ್ಶನಕ್ಕೆ ಹಾಜರಾಗಲು ತಿಳಿಸಲಾಗಿದೆ.

| ಕ್ರ.ಸಂ | ಘಟಕ ಕಾಲೇಜು | ಸ್ನಾತಕ ಪದವಿ ಕೋರ್ಸ್‌ಗಳು |
|---|---|---|
| 01 | ವಿಶ್ವವಿದ್ಯಾನಿಲಯದ ಘಟಕ ಕಾಲೇಜು, ತುರುವನೂರು | ಬಿ.ಎ, ಬಿ.ಕಾಂ, ಬಿ.ಎಸ್ಸಿ ಹಾಗೂ ಭಾಷ ವಿಷಯಗಳು ಕನ್ನಡ, ಇಂಗ್ಲೀಷ್ |

ಮೇಲ್ಕಾಣಿಸಿದ **ಸ್ನಾತಕ ಪದವಿ ವಿಷಯಗಳಿಗೆ** ಅತಿಥಿ ಉಪನ್ಯಾಸಕರು/ಬೋಧನಾ ಸಹಾಯಕರುಗಳನ್ನು ನೇಮಕ ಮಾಡುವ ಅಥವಾ ಮಾಡದಿರುವ ಅಧಿಕಾರವನ್ನು ವಿಶ್ವವಿದ್ಯಾನಿಲಯವು ಹೊಂದಿರುತ್ತದೆಯೆಂದು ಈ ಮೂಲಕ ಸ್ಪಷ್ಟಪಡಿಸಲಾಗಿದೆ. ತತ್ಸಂಬಂಧ ಆಗಮಿಸುವ ಅಭ್ಯರ್ಥಿಗಳಿಗೆ ವಿಶ್ವವಿದ್ಯಾನಿಲಯದಿಂದ ಯಾವುದೇ ರೀತಿಯ ಪ್ರಯಾಣ ಭತ್ಯೆ/ದಿನ ಭತ್ಯೆಗಳನ್ನು ಪಾವತಿಸಲಾಗುವುದಿಲ್ಲ.

ಆದೇಶಾನುಸಾರ

ಕುಲಸಚಿವರು,
ದಾವಣಗೆರೆ ವಿಶ್ವವಿದ್ಯಾನಿಲಯ,
ಶಿವಗಂಗೋತ್ರಿ, ದಾವಣಗೆರೆ-577 002

| |
|---|
| ಕರಡು ಪ್ರತಿ ಮಾನ್ಯ ಕುಲಸಚಿವರಿಂದ ಅನುಮೋದಿಸಲ್ಪಟ್ಟಿದೆ |

ಸಾರ್ವಜನಿಕ ಮಾಹಿತಿಗಾಗಿ ವಿಶ್ವವಿದ್ಯಾನಿಲಯದ ವೆಬ್ ಸೈಟ್ ಹಾಗೂ ಸೂಚನಾ ಫಲಕಗಳಿಗೆ.

Scanned with CamScanner